ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/ಶೈವಿ/84/ಶೈಗು/2017-18

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:20.06.2017.

# ಸುತ್ತೋಲೆ

**ವಿಷಯ:** ಕಾಲೇಜಿನ/ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗಾಗಿ ಹಾಗೂ ಶೈಕ್ಷಣಿಕ ಗುಣಮಟ್ಟವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಹಳೆಯ ವಿದ್ಯಾರ್ಥಿಗಳ ಸಂಘಗಳು (**Alumni Association**) ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಪ್ರೇರೇಪಿಸುವ ಬಗ್ಗೆ.

**ಉಲ್ಲೇಖ:**
1. ದಿನಾಂಕ:13.08.2013ರ ಈ ಕಛೇರಿಯ ಸುತ್ತೋಲೆ ಸಂ.ಕಾಶಿಇ/ಶೈವಿ/192/ಶೈಆಗು-ಸುತ್ತೋಲೆ/2010-11.
2. ದಿನಾಂಕ:06.05.2015ರ ಈ ಕಛೇರಿಯ ಸುತ್ತೋಲೆ ಸಂ.ಕಾಶಿಇ/ಶೈವಿ/15/ಶೈಗು/2015-16.

*******

ಇಲಾಖಾ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಶೈಕ್ಷಣಿಕ ಹಾಗೂ ಆಡಳಿತಾತ್ಮಕ ಗುಣಮಟ್ಟವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಪ್ರಾಂಶುಪಾಲರ ಜವಾಬ್ದಾರಿ ಮತ್ತು ದೈನಂದಿನ ಕರ್ತವ್ಯ ನಿರ್ವಹಣೆ ಕುರಿತು ಉಲ್ಲೇಖ(1)ರ ಈ ಕಛೇರಿಯ ಸುತ್ತೋಲೆಯಲ್ಲಿ ಮಾರ್ಗಸೂಚಿಗಳನ್ನು ಜಾರಿಗೊಳಿಸಲಾಗಿರುತ್ತದೆ. ಅದಗಂತೆ, ಸದರಿ ಮಾರ್ಗಸೂಚಿಗಳ ಕ್ರಮ ಸಂ.19ರಲ್ಲಿ ಕಾಲೇಜುಗಳಲ್ಲಿ ಹಳೆಯ ವಿದ್ಯಾರ್ಥಿಗಳ ಸಂಘ(**Alumni Association**)ಗಳನ್ನು ರಚಿಸಿ, ವರ್ಷದಲ್ಲಿ ಎರಡು ಬಾರಿ ಸಂಘದ ಸಭೆಯನ್ನು ಏರ್ಪಡಿಸಿ, ರಚನಾತ್ಮಕ ಚಟುವಟಿಕೆಗಳನ್ನು ಹಮ್ಮಿಕೊಳ್ಳುವಂತೆ ಸೂಚಿಸಲಾಗಿರುತ್ತದೆ. ಈ ಸಂಬಂಧ ಕಾಲೇಜಿನ / ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗಾಗಿ ಹೆಚ್ಚಿನ ಸಹಕಾರ ನೀಡುವಂತೆ ಹಾಗೂ ಸಕ್ರಿಯವಾಗಿ ತೊಡಗುವಂತೆ ಕಾಲೇಜಿನ ಹಳೆಯ ವಿದ್ಯಾರ್ಥಿಗಳನ್ನು ಪ್ರೇರೇಪಿಸುವುದು ಅತ್ಯಗತ್ಯವಾಗಿರುತ್ತದೆ. ಈ ನಿಟ್ಟಿನಲ್ಲಿ ಕೆಳಕಂಡ ಅಂಶಗಳನ್ನು ಪಾಲಿಸುವಂತೆ ಪ್ರಾಂಶುಪಾಲರುಗಳಿಗೆ ಈ ಮೂಲಕ ತಿಳಿಸಲಾಗಿದೆ.

- ಇದುವರೆಗೂ ಹಳೆಯ ವಿದ್ಯಾರ್ಥಿಗಳ ಸಂಘ ಸ್ಥಾಪನೆಯಾಗದೇ ಇರುವ ಕಾಲೇಜುಗಳಲ್ಲಿ ಸದರಿ ಸಂಘವನ್ನು ರಚಿಸಿ, ನೋಂದಣಿ ಮಾಡುವುದು. ಹಳೆಯ/ಹಿರಿಯ ವಿದ್ಯಾರ್ಥಿಗಳನ್ನು ಕಾಲೇಜಿನ ಐ.ಕ್ಯೂ.ಎ.ಸಿ.ಗೆ ಸದಸ್ಯರನ್ನಾಗಿ ನೇಮಕ ಮಾಡುವ ಮೂಲಕ ಕಾಲೇಜಿನ ವಿವಿಧ ಅಭಿವೃದ್ಧಿ ಕಾರ್ಯಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಲು ಪ್ರೇರೇಪಿಸುವುದು.

- ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಉನ್ನತ ವ್ಯಾಸಂಗ ಪೂರೈಸಿ ವಿವಿಧ ಕ್ಷೇತ್ರಗಳಲ್ಲಿ ಪ್ರಸ್ತುತ ಉತ್ತಮ ಹುದ್ದೆಯಲ್ಲಿದ್ದು, ಉನ್ನತ ವ್ಯಾಸಂಗ ಮಾಡಿ ಆ ಹಂತಕ್ಕೆ ಬರಲು ಅವರುಗಳು ಪಟ್ಟ ಶ್ರಮ, ಏಕಾಗ್ರತೆಯಿಂದ ಸಾಧಿಸಿದ ಶೈಕ್ಷಣಿಕ ಸಾಧನೆಗಳನ್ನು ವಿದ್ಯಾರ್ಥಿಗಳೊಂದಿಗೆ ಹಂಚಿಕೊಂಡು ಅವರುಗಳನ್ನು ಸಹ ಆ ನಿಟ್ಟಿನಲ್ಲಿ ಪ್ರೇರೇಪಿಸುವಂತಹ ಸಂವಾದ ಕಾರ್ಯಕ್ರಮಗಳನ್ನು / ವಿಶೇಷ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು.

- ಕೆ.ಎ.ಎಸ್./ಐ.ಎ.ಎಸ್/ಐ.ಪಿ.ಎಸ್., ಎನ್.ಇ.ಟಿ/ಎಸ್.ಎಲ್.ಇ.ಟಿ. ಮತ್ತಿತರ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಿರುವ/ತೇರ್ಗಡೆಯಾಗಿರುವ ಬಗ್ಗೆ ಹಾಗೂ ವಿವಿಧ ಇಲಾಖೆಗಳಲ್ಲಿ ಉನ್ನತ ಅಧಿಕಾರಿಗಳಾಗಿ ಕಾರ್ಯನಿರ್ವಹಿಸುತ್ತಿರುವ ಕಾಲೇಜಿನ ಹಳೆಯ ವಿದ್ಯಾರ್ಥಿಗಳ ಅನುಭವಗಳು ಹಾಗೂ ಮಾರ್ಗದರ್ಶನಗಳು ವಿದ್ಯಾರ್ಥಿಗಳಿಗೆ ದೊರೆಯುವಂತಾಗಲು ನೇರ ಸಂವಾದ/ವಿಶೇಷ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸುವುದು.

. . . . . 2

- ಮುಂಬರುವ ದಿನಗಳಲ್ಲಿ ಪದವಿ ನಂತರದ ಉನ್ನತ ವ್ಯಾಸಂಗಕ್ಕೂ ಸಿ.ಇ.ಟಿ. ಪದ್ಧತಿ ಜಾರಿಗೆ ತರುವ ಸಂಭವನೀಯತೆ ಹೆಚ್ಚಾಗಿರುವ ಹಿನ್ನೆಲೆಯಲ್ಲಿ, ಸಿ.ಇ.ಟಿ. ಪ್ರಕ್ರಿಯೆ ಬಗ್ಗೆ ವಿದ್ಯಾರ್ಥಿಗಳಿಗೆ ಹೆಚ್ಚಿನ ಮಾಹಿತಿ ನೀಡುವಂತೆ ಹಿರಿಯ ವಿದ್ಯಾರ್ಥಿಗಳ ಸಹಕಾರ ಕೋರುವುದು.
- ಪ್ರತಿ ವರ್ಷ ಅಂತಿಮ ಪದವಿ ಪೂರೈಸಿದ ವಿದ್ಯಾರ್ಥಿಗಳಿಗಾಗಿ "ಪದವಿ ದಿನಾಚರಣೆ" (**Graduation Day**) ಕಾರ್ಯಕ್ರಮ ಹಮ್ಮಿಕೊಳ್ಳುವುದರ ಮೂಲಕ ವಿದ್ಯಾರ್ಥಿಗಳನ್ನು ಗುರುತಿಸಿ, ಹಳೆಯ ವಿದ್ಯಾರ್ಥಿಗಳ ಸಂಘದ ಸದಸ್ಯರುಗಳನ್ನಾಗಿ ಮಾಡಿ, ಕಾಲೇಜಿನ ಅಭಿವೃದ್ಧಿ ಕಾರ್ಯಗಳಲ್ಲಿ ಅವರನ್ನು ಸಕ್ರಿಯವಾಗಿ ತೊಡಗಿಸಿಕೊಳ್ಳುವುದು.
- ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಈಗಾಗಲೇ ರಚನೆಯಾಗಿರುವ ಹಳೆಯ ವಿದ್ಯಾರ್ಥಿಗಳ ಸಂಘದ ಸಭೆ ಕರೆಯದೇ ಇರುವುದು ಹಾಗೂ ಕಾಲೇಜಿನ / ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಯಾವುದೇ ರಚನಾತ್ಮಕ ಚಟುವಟಿಕೆಗಳನ್ನು ಹಮ್ಮಿಕೊಳ್ಳದೇ ಇರುವುದು ಇಲಾಖೆಯ ಗಮನಕ್ಕೆ ಬಂದಿದ್ದು, ಇದನ್ನು ಗಂಭೀರವಾಗಿ ಪರಿಗಣಿಸಲಾಗಿರುತ್ತದೆ. ಆದ್ದರಿಂದ, ವರ್ಷದಲ್ಲಿ ಕನಿಷ್ಠ ಎರಡು ಬಾರಿ ಸಂಘದ ಸಭೆಗಳನ್ನು ತಪ್ಪದೇ ಆಯೋಜಿಸಿ, ಕಾಲೇಜಿನ ಸರ್ವತೋಮುಖ ಅಭಿವೃದ್ಧಿಗೆ ಹಾಗೂ ಆರೋಗ್ಯಪೂರ್ಣ ವಾತಾವರಣ ಸೃಷ್ಟಿಸಲು ಪೂರಕವಾಗುವಂತಹ ರಚನಾತ್ಮಕ ಕಾರ್ಯಗಳನ್ನು ಹಮ್ಮಿಕೊಳ್ಳುವಂತೆ ಹಳೆಯ ವಿದ್ಯಾರ್ಥಿಗಳನ್ನು ಪ್ರೇರೇಪಿಸುವುದು.
- ಸದರಿ ಸಭೆಗಳಲ್ಲಿ ಹಳೆಯ/ಹಿರಿಯ ವಿದ್ಯಾರ್ಥಿಗಳಿಂದ ಕಾಲೇಜಿನ ಶೈಕ್ಷಣಿಕ/ಆಡಳಿತಾತ್ಮಕ ಅಂಶಗಳ ಬಗ್ಗೆ ಪ್ರತಿಕ್ರಿಯೆ (**Feedback**) ಪಡೆಯುವುದು.
- ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವ್ಯಾಸಂಗ ಮಾಡಿ, ಪ್ರಸ್ತುತ ದೊಡ್ಡ ಕೈಗಾರಿಕೆಗಳಲ್ಲಿ, ಕಂಪನಿಗಳಲ್ಲಿ ಮತ್ತಿತರೆ ಕ್ಷೇತ್ರಗಳಲ್ಲಿ ಅಭಿವೃದ್ಧಿ ಸಾಧಿಸಿ, ಉನ್ನತ ಹುದ್ದೆಯಲ್ಲಿರುವ ಹಾಗೂ ಸ್ವಂತ ಕೈಗಾರಿಕೋದ್ಯಮಗಳನ್ನು ನಡೆಸುತ್ತಿರುವ ಹಿರಿಯ/ಹಳೆಯ ವಿದ್ಯಾರ್ಥಿಗಳು ಸಂವಾದ/ವಿಶೇಷ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸುವುದರೊಂದಿಗೆ ಇಂದಿನ ವಿದ್ಯಾರ್ಥಿಗಳಿಗೆ ಅವರವರ ಅರ್ಹತೆಯ ಆಧಾರದ ಮೇಲೆ ಉದ್ಯೋಗಾವಕಾಶ ಒದಗಿಸಲು ಚಿಂತನೆ ನಡೆಸಿ, ಅಗತ್ಯ ಕ್ರಮ ಕೈಗೊಳ್ಳುವಂತೆ ಅವರುಗಳನ್ನು ಪ್ರೇರೇಪಿಸುವುದು.
- ಸ್ವಂತ ಕೈಗಾರಿಕೋದ್ಯಮ / ವ್ಯಾಪಾರ-ವಹಿವಾಟುಗಳನ್ನು ಹೊಂದಿದ್ದು, ಅಥವಾ ಸರ್ಕಾರ ಮತ್ತು ಖಾಸಗಿ ಸಂಸ್ಥೆಗಳಲ್ಲಿ ಉನ್ನತ ಹುದ್ದೆಯಲ್ಲಿದ್ದು, ಆರ್ಥಿಕವಾಗಿ ಸದೃಢರಾದ ಹಳೆಯ ವಿದ್ಯಾರ್ಥಿಗಳು ತಾವು ಓದಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಹಲವಾರು ಮೂಲಭೂತ ಸೌಕರ್ಯಗಳನ್ನು / ಅಗತ್ಯ ಗ್ರಂಥಾಲಯ ಪುಸ್ತಕಗಳನ್ನು/ ಸಾಮಾಗ್ರಿ-ಸಲಕರಣೆಗಳನ್ನು ದೇಣಿಗೆಯಾಗಿ ನೀಡುವಂತೆ ಪ್ರೇರೇಪಿಸುವುದು.

28/6

**ಕಾಲೇಜು ಶಿಕ್ಷಣ ಆಯುಕ್ತರು**

**ಇವರಿಗೆ:**

1. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ.
2. ಇಲಾಖೆ ವ್ಯಾಪ್ತಿಯ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3. ಮಾಹಿತಿ ಅಧಿಕಾರಿಗಳು, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.
4. ಕಛೇರಿ ಪ್ರತಿ.